THE HINDU
www.thehindu.com
INDIA'S NATIONAL NEWSPAPER SINCE 1878

# Inter-school challenge launched to help city become clean, green, and sustainable

**The Hindu Bureau**
BENGALURU

On the occasion of Children's Day, an ideathon and a youth leadership summit have been launched for schools by the State government, through its Brand Bengaluru initiative, to help the city become clean, green, and sustainable.

According to a release, Ideathon-2023 is an inter-school student innovation initiative to involve school students in providing solutions to the problems and challenges of the city. The event aims to harness the potential of young minds from schools across Bengaluru.

The challenge is open to students from Classes X to XII. Each participating school can be represented by one team of two students.

The challenge is open to schools located only in Bengaluru and will accept solutions only in Kannada and English. There is no entry fee.

Only the first 200 entries will be considered. Schools can register on www.youngleadersofbengaluru.com. The last date is December 5.

The grand finale will be held as part of 'Youth Leadership Summit-2023' scheduled to be held in January 13, 2024, where eminent personalities and achievers will share their experiences to inspire and motivate the participating students to strive for excellence and to be solution-oriented citizens, said the release.

D.K. Shivakumar, Deputy Chief Minister, will interact with the students during the summit.

Sudha Murty, educator and author, will chair the jury and be part of the summit.

IN THE DEBTS RECOVERY
TRIBUNAL-2 AT BANGALORE
O.A. No. 697 of 2022

# THE TIMES OF INDIA

INDIA'S LARGEST ENGLISH NEWSPAP

# Student ideathon to boost Brand Bengaluru image

Ideathon'23, an inter-school student ideathon aimed at finding solutions that will elevate 'Brand Bengaluru', will be launched on the occasion of Children's Day. The challenge is open to students from grades 10 to 12/ PU colleges. Each participating school can send two students. The challenge will accept solutions only in Kannada and English. Schools can register on www.youngleadersofbengaluru.com. The initiative, inspired by Sudha Murty, has been conceptualised by Aisshwarya DKS Hegde. There is no entry fee and last date for registration is December 5.

# ಪ್ರಜಾವಾಣಿ

ಅತ್ಯಂತ ವಿಶ್ವಾಸಾರ್ಹ ಕನ್ನಡ ದಿನಪತ್ರಿಕೆ

ಪ್ರಜಾವಾಣಿ

## 'ಬ್ರ್ಯಾಂಡ್ ಬೆಂಗಳೂರು'ಗಾಗಿ ಡಿ.ಕೆ.ಶಿವಕುಮಾರ್ ಪುತ್ರಿ ಐಶ್ವರ್ಯಾ ಪರಿಕಲ್ಪನೆ

# 'ಅಂತರ ಶಾಲಾ ಐಡಿಯಾಥಾನ್ ಸ್ಪರ್ಧೆ'

ಪ್ರಜಾವಾಣಿ ವಾರ್ತೆ

ಬೆಂಗಳೂರು: 'ಬ್ರ್ಯಾಂಡ್ ಬೆಂಗಳೂರಿಗಾಗಿ' ಹೊಸ ಆಲೋಚನೆಗಳ ಆವಿಷ್ಕಾರ ಉದ್ದೇಶದಿಂದ 'ಅಂತರ ಶಾಲಾ ಐಡಿಯಾಥಾನ್ ಸ್ಪರ್ಧೆ' ಆಯೋಜಿಸುವ ಪರಿಕಲ್ಪನೆಯನ್ನು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪುತ್ರಿ ಐಶ್ವರ್ಯಾ ಡಿಕೆಎಸ್ ಹೆಗ್ಡೆ ರೂಪಿಸಿದ್ದಾರೆ. 2024ರ ಜ.13ರಂದು 'ಯುವ ನಾಯಕತ್ವ ಸಮ್ಮೇಳನ'ದಲ್ಲಿ ಅಂತಿಮ ಸುತ್ತಿನ ಸ್ಪರ್ಧೆ ನಡೆಯಲಿದೆ. ಆ ಸಮ್ಮೇಳನದಲ್ಲಿ ವಿದ್ಯಾರ್ಥಿಗಳ ಜೊತೆ ಡಿ.ಕೆ. ಶಿವಕುಮಾರ್ ಸಂವಾದ ನಡೆಸಲಿದ್ದಾರೆ.

'ನಗರ ಎದುರಿಸುತ್ತಿರುವ ವಿವಿಧ ಸಮಸ್ಯೆ ಮತ್ತು ಸವಾಲುಗಳಿಗೆ ಪರಿಹಾರ ಕಂಡುಕೊಳ್ಳಲು ಶಾಲಾ ಮಕ್ಕಳಿಗೆ ಅವಕಾಶ ಕಲ್ಪಿಸುವುದು ಐಶ್ವರ್ಯಾ ಅವರ ಉದ್ದೇಶವಾಗಿದೆ. ಈ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳ ಸಾಧಕರು ಹಾಗೂ ಗಣ್ಯರು ತಮ್ಮ ಅನುಭವ ಹಂಚಿಕೊಳ್ಳುವ ಮೂಲಕ ವಿದ್ಯಾರ್ಥಿಗಳು ಪರಿಣಾಮಕಾರಿ



ಐಶ್ವರ್ಯಾ ಡಿಕೆಎಸ್ ಹೆಗ್ಡೆ

ಪರಿಹಾರ ಕೇಂದ್ರಿತ ಉತ್ತಮ ನಾಗರಿಕರಾಗಲು ಉತ್ತೇಜನ ನೀಡುವಂತೆ ಪ್ರೋತ್ಸಾಹಿಸಲಾಗುವುದು' ಎಂದು ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಇನ್ಫೋಸಿಸ್ ಫೌಂಡೇಷನ್ ಅಧ್ಯಕ್ಷೆ ಸುಧಾ ಮೂರ್ತಿ ಅವರು ಅಂತಿಮ ಸುತ್ತಿನಲ್ಲಿ ಮುಖ್ಯ ತೀರ್ಪುಗಾರರಾಗಿ ಭಾಗವಹಿಸಲಿದ್ದಾರೆ. ಐಡಿಯಾಥಾನ್ ಹಾಗೂ ಯುವ ನಾಯಕತ್ವ ಸಮ್ಮೇಳನ ಕಾರ್ಯಕ್ರಮಗಳನ್ನು ಕ್ವಿಜ್ ಮಾಸ್ಟರ್ ಹಾಗೂ ಶಿಕ್ಷಣ

**ಮುಖ್ಯಾಂಶಗಳು**

- ಜ.13ರಂದು 'ಯುವ ನಾಯಕತ್ವ ಸಮ್ಮೇಳನ'
- ಸವಾಲುಗಳಿಗೆ ಪರಿಹಾರಕ್ಕೆ ವಿದ್ಯಾರ್ಥಿಗಳಿಗೆ ಅವಕಾಶ
- ಸಾಧಕರು, ಗಣ್ಯರಿಂದ ಅನುಭವಗಳ ವಿನಿಮಯ

ತಜ್ಞ ಗಿರಿ ಪಿಕ್ ಬ್ರೈನ್ ಬಾಲಸುಬ್ರಮಣಿಯಂ ನೇತೃತ್ವದ ಗ್ರೇಕ್ಯಾಪ್ಸ್ ನಾಲೆಡ್ಜ್ ಟ್ರೈಬ್ ಸಹಯೋಗದಲ್ಲಿ ನಡೆಯಲಿದೆ.

'ಅಂತರ ಶಾಲಾ ಐಡಿಯಾಥಾನ್ ಸ್ಪರ್ಧೆ': ಅಂತರ ಶಾಲಾ ವಿದ್ಯಾರ್ಥಿಗಳ 'ಐಡಿಯಾಥಾನ್- 23' ಕಾರ್ಯಕ್ರಮದಲ್ಲಿ ನಗರದ ಸಮಸ್ಯೆಗಳು ಹಾಗೂ ಸವಾಲುಗಳಿಗೆ ಪರಿಹಾರ ರೂಪಿಸುವ ಪ್ರಕ್ರಿಯೆಯಲ್ಲಿ ವಿದ್ಯಾರ್ಥಿಗಳನ್ನು ಒಳಗೊಳ್ಳುವಂತೆ ಮಾಡುವುದು ಉದ್ದೇಶವಾಗಿದೆ. ಬೆಂಗಳೂರು ನಗರವನ್ನು ಸ್ವಚ್ಛ, ಹಸಿರು ಹಾಗೂ ಸುಸ್ಥಿರ ನಗರವನ್ನಾಗಿಸಲು ರಾಜ್ಯ ಸರ್ಕಾರವು ಹಮ್ಮಿಕೊಂಡಿರುವ 'ಬ್ರ್ಯಾಂಡ್ ಬೆಂಗಳೂರು' ಕಾರ್ಯಕ್ರಮದ ಮೂಲ ಉದ್ದೇಶಗಳ ಬಗ್ಗೆ ಮಕ್ಕಳಲ್ಲಿ ಅರಿವು, ಜಾಗೃತಿ ಮೂಡಿಸಲು, ಇದೇ ಮೊದಲ ಬಾರಿಗೆ ಇಂತಹ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದೂ ಪ್ರಕಟಣೆ ತಿಳಿಸಿದೆ.

ಬೆಂಗಳೂರು ನಗರದಲ್ಲಿರುವ ಶಾಲೆಗಳ 10 ರಿಂದ 12 ನೇ ತರಗತಿ (ಪಿಯು)ವರೆಗಿನ ವಿದ್ಯಾರ್ಥಿಗಳು ಈ ಸ್ಪರ್ಧೆಯಲ್ಲಿ ಪಾಲ್ಗೊಳ್ಳಬಹುದು. ಭಾಗವಹಿಸಲು ಇಚ್ಛಿಸುವ ಶಾಲೆಯು ಇಬ್ಬರು ವಿದ್ಯಾರ್ಥಿಗಳ ಒಂದು ತಂಡ ಕಳುಹಿಸಬಹುದು.

ಭಾಗವಹಿಸುವ ವಿದ್ಯಾರ್ಥಿಗಳು ಕನ್ನಡ ಅಥವಾ ಇಂಗ್ಲಿಷ್‌ನಲ್ಲಿ ಮಾತ್ರ ವಿಚಾರ ಮಂಡಿಸಲು ಅವಕಾಶವಿದೆ. ಯಾವುದೇ ಪ್ರವೇಶ ಶುಲ್ಕ ಇಲ್ಲ. ಮೊದಲು ನೋಂದಣಿಯಾಗುವ 200 ಶಾಲೆಗಳಿಗೆ ಮಾತ್ರ ಅವಕಾಶ. ಆಸಕ್ತ ಶಾಲೆಗಳು 2023 ಡಿ. 5ರ ಒಳಗೆ https://www.youngleadersofbengaluru.com ನಲ್ಲಿ ನೊಂದಣಿ ಮಾಡಿಕೊಳ್ಳಬಹುದು.

ಕನ್ನಡಪ್ರಭ

ಕನ್ನಡಪ್ರಭ

# ಬ್ರ್ಯಾಂಡ್ ಬೆಂಗಳೂರಿಗೆ ವಿದ್ಯಾರ್ಥಿಗಳ ಸಲಹೆ ಪಡೆಯಲು ಐಡಿಯಾಥಾನ್

## ಯುವ ಶಿಕ್ಷಣ ತಜ್ಞೆ ಐಶ್ವರ್ಯಾ ಪರಿಕಲ್ಪನೆಯಲ್ಲಿ ಆಯೋಜನೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಬ್ರ್ಯಾಂಡ್ ಬೆಂಗಳೂರಿಗಾಗಿ ಶಾಲಾ ಮಕ್ಕಳ ಆಲೋಚನೆ ಹಾಗೂ ಸಲಹೆಗಳನ್ನು ಪಡೆದುಕೊಳ್ಳುವ ಸಲುವಾಗಿ ಬೆಂಗಳೂರು ನಗರಾಭಿವೃದ್ಧಿ ಇಲಾಖೆಯಿಂದ ಅಂತರ ಶಾಲಾ 'ಐಡಿಯಾಥಾನ್ 23' ಸ್ಪರ್ಧೆ,'ಯುವ ಸಮ್ಮೇಳನ' ಆಯೋಜಿಸಲಾಗುತ್ತಿದೆ.

ಬ್ರ್ಯಾಂಡ್ ಬೆಂಗಳೂರಿಗಾಗಿ ಹೊಸ ಆಲೋಚನೆಗಳ ಆವಿಷ್ಕಾರಕ್ಕೆ ಅಂತರ ಶಾಲಾ ಐಡಿಯಾಥಾನ್ ಸ್ಪರ್ಧೆ ನಡೆಸಲಾಗುತ್ತದೆ. ಯುವ ಶಿಕ್ಷಣ ತಜ್ಞೆ ಐಶ್ವರ್ಯಾ ಡಿಕೆಎಸ್ ಹೆಗ್ಡೆ ಅವರ ಪರಿಕಲ್ಪನೆಯಲ್ಲಿ ಕಾರ್ಯಕ್ರಮ ರೂಪುಗೊಳ್ಳುತ್ತಿದ್ದು, ಕ್ವಿಜ್ ಮಾಸ್ಟ್ ಹಾಗೂ ಶಿಕ್ಷಣ ತಜ್ಞ ಬಾಲಸುಬ್ರಮಣಿಯಂ ಅವರ ಗ್ರೇಕ್ಯಾಪ್ಸ್ ನಾಲೆಡ್ಜ್ ಟ್ರೈಬ್ ಸಹಯೋಗದಲ್ಲಿ ಸ್ಪರ್ಧೆ ಆಯೋಜಿಸಲಾಗಿದೆ.

**200 ಶಾಲೆಗಳಿಗೆ ಅವಕಾಶ:** ಬೆಂಗಳೂರಿನ ಯಾವುದೇ ಶಾಲೆಯ 10ನೇ ತರಗತಿಯಿಂದ ಪಿಯು ವಿದ್ಯಾರ್ಥಿಗಳು ಇದರಲ್ಲಿ ಪಾಲ್ಗೊಳ್ಳಬಹುದು. ಸ್ಪರ್ಧೆಯಲ್ಲಿ ಭಾಗವಹಿಸಲಿಚ್ಛಿಸುವ ಶಾಲೆಯು ತನ್ನ ಇಬ್ಬರು ವಿದ್ಯಾರ್ಥಿಗಳ ತಂಡವನ್ನು ಕಳುಹಿಸಬಹುದು. ಆಸಕ್ತ ಶಾಲೆಗಳು ಡಿ.5ರೊಳಗೆ **www.youngleadersofbengaluru.com** ವೆಬ್‌ಸೈಟ್‌ನಲ್ಲಿ ನೋಂದಣಿ ಮಾಡಿಕೊಳ್ಳಬಹುದು.



ಹಲವು ಸುತ್ತಿನ ಆಯ್ಕೆ ನಂತರ ಅತ್ಯುತ್ತಮ ಆಲೋಚನೆಗಳು, ಸಲಹೆಗಳನ್ನು ಅಂತಿಮ ಸುತ್ತಿಗೆ ಆಯ್ಕೆ ಮಾಡಿ ಸ್ಪರ್ಧೆಯ ಜಡ್ಜ್‌ಗಳ ಮುಂದೆ ಇಡಲಾಗುತ್ತದೆ. ಸ್ಪರ್ಧೆಯ ಅಂತಿಮ ಸುತ್ತು 2024ರ ಜನವರಿ 13ರಂದು ನಡೆಯುವ ಯುವ ನಾಯಕತ್ವ ಸಮ್ಮೇಳನದಲ್ಲಿ ನಡೆಯಲಿದೆ. ಲೇಖಕಿ, ಉದ್ಯಮಿ ಸುಧಾಮೂರ್ತಿ ಅವರು ಯುವ ನಾಯಕತ್ವ ಸಮ್ಮೇಳನದ ಮುಖ್ಯ ತೀರ್ಪುಗಾರರಾಗಿರುತ್ತಾರೆ. ಈ ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ವಿದ್ಯಾರ್ಥಿಗಳ ಜತೆ ಸಂವಾದ ನಡೆಸಲಿದ್ದಾರೆ.

# ಉದಯವಾಣಿ

ಜನಮನದ ಜೀವನಾಡಿ

# ‘ಅಂತರ ಶಾಲಾ ಐಡಿಯಾಥಾನ್-23 ಸ್ಪರ್ಧೆ’

## ಬ್ರ್ಯಾಂಡ್ ಬೆಂಗಳೂರು ಪರಿಕಲ್ಪನೆಯಡಿ ಮಕ್ಕಳ ದಿನದ ಪ್ರಯುಕ್ತ ಆಯೋಜನೆ

**ಬೆಂಗಳೂರು:** ‘ಬ್ರ್ಯಾಂಡ್ ಬೆಂಗಳೂರು’ ಪರಿಕಲ್ಪನೆಯಡಿ ಮಕ್ಕಳ ದಿನಾಚರಣೆ ಅಂಗವಾಗಿ ನಗರದ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗಾಗಿ ‘ಅಂತರ ಶಾಲಾ ಐಡಿಯಾಥಾನ್-23 ಸ್ಪರ್ಧೆ’ ಆಯೋಜಿಸಲಾಗಿದೆ. ತಮ್ಮ ನಗರದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಶಾಲಾ ಮಕ್ಕಳ ಪಾಲ್ಗೊಳ್ಳುವಿಕೆಗೆ ಅವಕಾಶ ಕಲ್ಪಿಸಲು ವಿಶಿಷ್ಟ ಅಂತರ-ಶಾಲಾ ಸ್ಪರ್ಧೆಯ ಉದ್ದೇಶವಾಗಿದೆ. ಜತೆಗೆ ರಾಜಧಾನಿ ವ್ಯಾಪ್ತಿಯ ಶಾಲೆಗಳಲ್ಲಿ ವಿಭಿನ್ನ ಐಡಿಯಾಥಾನ್ ಮತ್ತು ಯುವ ನಾಯಕತ್ವ ಸಮ್ಮೇಳನ ನಡೆಯಲಿದೆ. ಗ್ರೇಕ್ಯಾಪ್ಸ್ ನಾಲೆಜ್ ಟ್ರೈಬ್ ಸಂಸ್ಥೆ ಈ ಕಾರ್ಯಕ್ರಮದ ಆಯೋಜಕರಾಗಿದ್ದಾರೆ.

ಸ್ಪರ್ಧೆಯಲ್ಲಿ ಬೆಂಗಳೂರು ನಗರದಲ್ಲಿರುವ ಶಾಲೆಗಳ 10 ನೇ ತರಗತಿ ಮಕ್ಕಳು ಹಾಗೂ ಪಿಯು ಕಾಲೇಜು ವಿದ್ಯಾರ್ಥಿಗಳು ಪಾಲ್ಗೊಳ್ಳಬಹುದಾಗಿದೆ. ಭಾಗವಹಿಸಲು ಇಚ್ಛಿಸುವ ಶಾಲೆ ಇಬ್ಬರು ವಿದ್ಯಾರ್ಥಿಗಳ ಒಂದು ತಂಡವನ್ನು ಕಳಿಸಬಹುದಾಗಿದೆ. ಸ್ಪರ್ಧೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ಕನ್ನಡ ಅಥವಾ ಇಂಗ್ಲಿಷ್ ನಲ್ಲಿ ಮಾತ್ರ ತಮ್ಮ ವಿಚಾರ ಮಂಡಿಸಲು ಅವಕಾಶವಿದೆ. ಈ ಸ್ಪರ್ಧೆಗೆ ಯಾವುದೇ ಪ್ರವೇಶ ಶುಲ್ಕ ಇರುವುದಿಲ್ಲ. ಮೊದಲು ನೋಂದಣಿಯಾಗುವ 200 ಶಾಲೆಗಳಿಗೆ ಮಾತ್ರ ಅವಕಾಶ ಕಲ್ಪಿಸಲಾಗುತ್ತಿದೆ.

**ಡಿ.5ರ ಒಳಗೆ ಹೆಸರು ನೋಂದಣಿ ಮಾಡಿ:** ಆಸಕ್ತ ಶಾಲೆಗಳು 2023 ಡಿ.5 ರೊಳಗೆ https://www.youngleadersofbengaluru.com ನಲ್ಲಿ ನೋಂದಣಿ ಮಾಡಿಕೊಳ್ಳಬಹುದಾಗಿದೆ. ಈ ಸ್ಪರ್ಧೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ನಗರದ ಸುಧಾರಣೆಗೆ ತಮ್ಮ ಸಲಹೆ, ಪರಿಹಾರ ಸೂಚಿಸಬೇಕು. ಹಲವು ಸುತ್ತಿನ ನಂತರ ಅತ್ಯುತ್ತಮ ಆಲೋಚನೆಗಳು, ಸಲಹೆಗಳನ್ನು ಅಂತಿಮ ಸುತ್ತಿಗೆ ಆಯ್ಕೆ ಮಾಡಿ ತೀರ್ಪುಗಾರರ ಮುಂದೆ ಇಡಲಾಗುವುದು. ಐಡಿಯಾಥಾನ್ ಪರಿಹಾರಗಳು 2030ರ ವೇಳೆಗೆ ಸುಸ್ಥಿರ ಅಭಿವೃದ್ಧಿ ಗುರಿಯ ಸುತ್ತ ಕೇಂದ್ರೀಕೃತವಾಗಲಿವೆ.

ಸ್ಪರ್ಧೆಯ ಅಂತಿಮ ಸುತ್ತು 2024ರ ಜನವರಿ 13 ರಂದು ನಡೆಯಲಿದೆ. ಅಂದು ಯುವ ನಾಯಕತ್ವ ಸಮ್ಮೇಳನದಲ್ಲಿ ನಡೆಯಲಿದ್ದು, ವಿವಿಧ ಕ್ಷೇತ್ರಗಳ ಸಾಧಕರು ಹಾಗೂ ಗಣ್ಯರು ತಮ್ಮ ಅನುಭವ ಹಂಚಿಕೊಳ್ಳುವ ಮೂಲಕ ಸ್ಪರ್ಧೆಯ ವಿದ್ಯಾರ್ಥಿಗಳು ಪರಿಣಾಮಕಾರಿ ಪರಿಹಾರ ಕೇಂದ್ರಿತ ಉತ್ತಮ ನಾಗರಿಕರಾಗಲು ಉತ್ತೇಜನ ನೀಡಲಿದ್ದಾರೆ. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಯುವ ನಾಯಕತ್ವ ಸಮ್ಮೇಳನದಲ್ಲಿ ವಿದ್ಯಾರ್ಥಿಗಳ ಜತೆ ಸಂವಾದ ನಡೆಸಲಿದ್ದಾರೆ. ಲೇಖಕಿ ಸುಧಾಮೂರ್ತಿ ಅವರು ಯುವ ನಾಯಕತ್ವ ಸಮ್ಮೇಳನದ ಮುಖ್ಯ ತೀರ್ಪುಗಾರರಾಗಿರುತ್ತಾರೆ.



ಶಿಕ್ಷಣ ತಜ್ಞೆ ಐಶ್ವರ್ಯ ಡಿಕೆಎಸ್ ಹೆಗ್ಡೆ

ವಿದ್ಯಾರ್ಥಿಗಳ ಚಿಂತನೆ, ಪ್ರತಿಭೆ ಆವಿಷ್ಕಾರ ಕಾರ್ಯಕ್ರಮ ಯುವ ಉತ್ಸಾಹಿ ಶಿಕ್ಷಣ ತಜ್ಞೆ ಐಶ್ವರ್ಯ ಡಿಕೆಎಸ್ ಹೆಗ್ಡೆ ಅವರ ಪರಿಕಲ್ಪನೆಯಲ್ಲಿ ಮೂಡಿಬರಲಿದೆ. ಜತೆಗೆ ಐಡಿಯಾಥಾನ್ ಹಾಗೂ ಯುವ ನಾಯಕತ್ವ ಸಮ್ಮೇಳನ ಕಾರ್ಯಕ್ರಮಗಳು ಖ್ಯಾತ ಕ್ವಿಜ್ ಮಾಸ್ಟರ್ ಪಿಕ್ ಬ್ರೈನ್ ಬಾಲಸುಬ್ರಮಣಿಯಂ ನೇತೃತ್ವದಲ್ಲಿ ಆಯೋಜಿಸಲಾಗುತ್ತಿದೆ ಎಂದು ಪ್ರಕಟಣೆ ತಿಳಿಸಿದೆ.

# ವಿಜಯವಾಣಿ

ಕನ್ನಡಿಗರ ಧ್ವನಿ

ವಿಜಯವಾಣಿ ನಂ.1 ಕನ್ನಡ ದಿನಪತ್ರಿಕೆ

# ವಿದ್ಯಾರ್ಥಿಗಳಿಗೆ ಐಡಿಯಾಥಾನ್ ಸ್ಪರ್ಧೆ

## ನೋಂದಣಿಗೆ ಡಿ.5 ಕೊನೇ ದಿನ | ಬ್ರ್ಯಾಂಡ್ ಬೆಂಗಳೂರು ಯೋಜನೆಗೆ ಸಹಕಾರಿ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ನಗರದ ಸಮಸ್ಯೆ ಮತ್ತು ಸವಾಲುಗಳಿಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಆರಂಭಿಸಿರುವ 'ಬ್ರ್ಯಾಂಡ್ ಬೆಂಗಳೂರು' ಯೋಜನೆಯಡಿ ಶಾಲಾ ಮಕ್ಕಳಿಗೆ 'ಅಂತರ ಶಾಲಾ ಐಡಿಯಾಥಾನ್-2023' ಸ್ಪರ್ಧೆ ಆಯೋಜಿಸಲಾಗಿದೆ. ಮಕ್ಕಳ ದಿನಾಚರಣೆ ಅಂಗವಾಗಿ 'ಬಿ ದಿ ಚೇಂಜ್' ಹೆಸರಿನಲ್ಲಿ ಬೆಂಗಳೂರಿನಲ್ಲಿರುವ ಶಾಲಾ ವಿದ್ಯಾರ್ಥಿಗಳಿಗಾಗಿ ಐಡಿಯಾಥಾನ್ ಮತ್ತು ಯುವ ನಾಯಕತ್ವ ಶೃಂಗಸಭೆ ಆಯೋಜಿಸುತ್ತಿದೆ. 'ಸ್ವಚ್ಛ, ಹಸಿರು ಮತ್ತು ಸುಸ್ಥಿರ' ನಗರವನ್ನಾಗಿ ಮಾಡ ಬೇಕೆಂಬ 'ಬ್ರ್ಯಾಂಡ್ ಬೆಂಗಳೂರು' ಯೋಜನೆಯ ಉಪಕ್ರಮಕ್ಕೆ ಇದು ಸಹಕಾರಿಯಾಗಿದೆ.

**ಸ್ಪರ್ಧೆಯ ವಿವರ:** 'ಐಡಿಯಾಥಾನ್-23' ಬೆಂಗಳೂರಿನ ಶಾಲೆಗಳಲ್ಲಿರುವ ಯುವ ಮನಸುಗಳ ಆಲೋಚನೆಗಳನ್ನು ಬಳಸಿಕೊಳ್ಳುವ ಉದ್ದೇಶ ಹೊಂದಲಾಗಿದೆ. 10ರಿಂದ 12ನೇ ತರಗತಿ ಹಾಗೂ ಪಿಯು ವಿದ್ಯಾರ್ಥಿಗಳು ಭಾಗವಹಿಸಬಹುದಾಗಿದೆ. ಪ್ರತಿ ಶಾಲೆಯ ಇಬ್ಬರು ವಿದ್ಯಾರ್ಥಿಗಳು ಒಂದು ತಂಡವಾಗಿ ಭಾಗವಹಿಸಬಹುದು. ನಗರದಲ್ಲಿರುವ ಸಮಸ್ಯೆಗಳಿಗೆ ಮಾತ್ರ ಈ ಸ್ಪರ್ಧೆ ಅನ್ವಯವಾಗಲಿದೆ.

ಸವಾಲುಗಳಿಗೆ ಕನ್ನಡ ಮತ್ತು ಇಂಗ್ಲಿಷ್ ಭಾಷೆ ಮೂಲಕ ಪರಿಹಾರಗಳನ್ನು ಸೂಚಿಸಬಹುದಾಗಿದೆ. ಸ್ಪರ್ಧೆಗೆ ಯಾವುದೇ ರೀತಿಯ ಪ್ರವೇಶ ಶುಲ್ಕ ಇಲ್ಲ. ಮೊದಲ 200 ಪ್ರವೇಶಾರ್ಥಿಗಳನ್ನು ಆದ್ಯತೆ ಮೇರೆಗೆ ಪರಿಗಣಿಸಲಾಗುತ್ತದೆ. ವೆಬ್‌ಸೈಟ್ www.youngleadersofbengaluru.com ಮೂಲಕ ಡಿ.5ರೊಳಗೆ ಶಾಲೆಗಳು ನೋಂದಣಿ ಮಾಡಿಕೊಳ್ಳಬಹುದು.

**ಜ.13ರಂದು ಪ್ರಶಸ್ತಿ ಪ್ರದಾನ:** 2024ರ ಜ.13ರಂದು ನಡೆಯಲಿರುವ ಯುವ ನಾಯಕತ್ವ ಶೃಂಗಸಭೆ-2023ರಂದೇ ಸ್ಪರ್ಧೆಯ ಗ್ರ್ಯಾಂಡ್ ಫಿನಾಲೆ ಕೂಡ ನಡೆಯಲಿದೆ. ಕಾರ್ಯಕ್ರಮದಲ್ಲಿ ಗಣ್ಯ ವ್ಯಕ್ತಿಗಳು ಮತ್ತು ಸಾಧಕರು ಶ್ರೇಷ್ಠತೆ ಮತ್ತು ಪರಿಹಾರಾತ್ಮಕ ನಾಗರಿಕರಾಗಲು ಬೇಕಾದ ಸ್ಫೂರ್ತಿದಾಯಕ ಹಾಗೂ ಪ್ರೇರಣಾದಾಯಕ ಅನುಭವಗಳನ್ನು ಹಂಚಿಕೊಳ್ಳಲಿದ್ದಾರೆ.


ಐಶ್ವರ್ಯಾ

### ಯೋಜನೆ ಜಾರಿ ಹಿಂದೆ ಡಿಸಿಎಂ, ಸುಧಾ ಮೂರ್ತಿ

ಯೋಜನೆಯ ಹಿಂದೆ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಇನ್ಫೋಸಿಸ್ ಪ್ರತಿಷ್ಠಾನದ ಅಧ್ಯಕ್ಷೆ ಸುಧಾ ಮೂರ್ತಿ ಸಹಕಾರ ನೀಡಲಿದ್ದಾರೆ. ವಿದ್ಯಾರ್ಥಿಗಳ ನಾವೀನ್ಯತಾ ಉಪಕ್ರಮವು ಯುವ ಶಿಕ್ಷಣ ತಜ್ಞೆ ಐಶ್ವರ್ಯ ಡಿಕೆಎಸ್ ಹೆಗ್ಡೆ ಅವರದ್ದಾಗಿದೆ. ಗ್ರೇಕ್ಯಾಪ್ಸ್ ನಾಲೆಜ್ ಟ್ರೈಬ್ ಸಹಯೋಗದೊಂದಿಗೆ ಕಾರ್ಯಕ್ರಮ ನಡೆಸಲಾಗುತ್ತಿದೆ. ಹೆಸರಾಂತ ಕ್ವಿಜ್ ಮಾಸ್ಟರ್ ಮತ್ತು ಶಿಕ್ಷಣ ತಜ್ಞ ಗಿರಿ ಪಿಕ್ ಬ್ರೈನ್ ಬಾಲಸುಬ್ರಮಣ್ಯಂ ಕಾರ್ಯನಿರ್ವಹಿಸುತ್ತಿದ್ದಾರೆ.

PRIDE
VK
ವಿಜಯ ಕರ್ನಾಟಕ

# ಬ್ರ್ಯಾಂಡ್ ಬೆಂಗಳೂರಿಗೆ ಹೊಸ ಪರಿಕಲ್ಪನೆ

## ಅಂತರಶಾಲಾ 'ಐಡಿಯಾಥಾನ್'ಗೆ ಡಿಸಿಎಂ ಪುತ್ರಿ ನೇತೃತ್ವ

■ **ವಿಕ ಸುದ್ದಿಲೋಕ** ಬೆಂಗಳೂರು

ಡಿಸಿಎಂ ಡಿ.ಕೆ.ಶಿವಕುಮಾರ್ ಅವರ 'ಬ್ರ್ಯಾಂಡ್ ಬೆಂಗಳೂರು' ಮಹತ್ವಾಕಾಂಕ್ಷೆಗೆ ಹೊಸ ಆಲೋಚನೆಗಳನ್ನು ಜೋಡಿಸುವ



ಜವಾಬ್ದಾರಿಯನ್ನು ಅವರ ಪುತ್ರಿ ಐಶ್ವರ್ಯ ಡಿಕೆಎಸ್ ಹೆಗ್ಡೆ ವಹಿಸಿಕೊಂಡಿದ್ದಾರೆ.

ಬೆಂಗಳೂರು ನಗರ ಎದುರಿಸುತ್ತಿರುವ ಸಮಸ್ಯೆ ಮತ್ತು ಸವಾಲುಗಳಿಗೆ ಪರಿಹಾರ ಕಂಡುಕೊಳ್ಳಲು ಶಾಲಾ ಮಕ್ಕಳಿಂದ ಹೊಸ ಆಲೋಚನೆಗಳನ್ನು ಕಂಡುಕೊಳ್ಳುವ ಪರಿಕಲ್ಪನೆಯನ್ನು ಡಿ.ಕೆ.ಶಿವಕುಮಾರ್ ಅವರ ಪುತ್ರಿ ಐಶ್ವರ್ಯ ರೂಪಿಸಿದ್ದು, ಅದಕ್ಕಾಗಿ ಅಂತರಶಾಲಾ 'ಐಡಿಯಾಥಾನ್' ಎಂಬ ಸ್ಪರ್ಧೆಯನ್ನು ಪ್ರಕಟಿಸಲಾಗಿದೆ. ಮಕ್ಕಳ ದಿನಾಚರಣೆಯ ಅಂಗವಾಗಿ ಬೆಂಗಳೂರು ನಗರಾದ್ಯಂತ ಶಾಲೆಗಳಲ್ಲಿ ವಿಭಿನ್ನ 'ಐಡಿಯಾಥಾನ್ ಮತ್ತು ಯುವ ನಾಯಕತ್ವ ಸಮ್ಮೇಳನ' ಆಯೋಜಿಸಲಾಗುತ್ತಿದೆ. ಈ ಕುರಿತು ಡಿಸಿಎಂ ಮಾಧ್ಯಮ ವಿಭಾಗ ಸೋಮವಾರ ವಿವರಗಳನ್ನು ಪ್ರಕಟಿಸಿದೆ.

'ಐಡಿಯಾಥಾನ್ -23' ಅಂತರ ಶಾಲಾ ವಿದ್ಯಾರ್ಥಿಗಳ ಕಾರ್ಯಕ್ರಮವಾಗಿದ್ದು, ಮಕ್ಕಳು ನಾಗರಿಕ ಚಟುವಟಿಕೆಯಲ್ಲಿ ಪಾಲ್ಗೊಳ್ಳಲು ಒಂದು ವಿಶೇಷ ವೇದಿಕೆಯಾಗಲಿದೆ. ನಗರದ ಶಾಲೆಗಳ 10ನೇ ತರಗತಿಯಿಂದ ಪಿಯುಸಿವರೆಗಿನ ವಿದ್ಯಾರ್ಥಿಗಳು ಪಾಲ್ಗೊಳ್ಳಬಹುದು.

**10ನೇ ತರಗತಿಯಿಂದ ಪಿಯುಸಿವರೆಗಿನ ವಿದ್ಯಾರ್ಥಿಗಳು ಪಾಲ್ಗೊಳ್ಳಲು ಅವಕಾಶ**

ಸ್ಪರ್ಧೆಯಲ್ಲಿ ಭಾಗವಹಿಸಲು ಇಚ್ಛಿಸುವ ಶಾಲೆಯು ಇಬ್ಬರು ವಿದ್ಯಾರ್ಥಿಗಳ ಒಂದು ತಂಡವನ್ನು ಕಳಿಸಬಹುದು. ಸ್ಪರ್ಧೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ಕನ್ನಡ ಅಥವಾ ಇಂಗ್ಲಿಷ್‌ನಲ್ಲಿ ಮಾತ್ರ ತಮ್ಮ ವಿಚಾರ ಮಂಡಿಸಲು ಅವಕಾಶವಿದೆ. ಈ ಸ್ಪರ್ಧೆಯಲ್ಲಿ ಭಾಗವಹಿಸಲು ಯಾವುದೇ ಪ್ರವೇಶ ಶುಲ್ಕ ಇರುವುದಿಲ್ಲ, ಮೊದಲು ನೊಂದಣಿಯಾಗುವ 200 ಶಾಲೆಗಳಿಗೆ ಮಾತ್ರ ಅವಕಾಶ ನೀಡಬಹುದು. ಆಸಕ್ತ ಶಾಲೆಗಳು ಡಿಸೆಂಬರ್ 5ರೊಳಗೆ https://www.youngleadersofbengaluru.com ನಲ್ಲಿ ನೊಂದಣಿ ಮಾಡಿಕೊಳ್ಳಬಹುದು.

ಸ್ಪರ್ಧೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ನಗರದ ಸುಧಾರಣೆಗೆ ತಮ್ಮ ಸಲಹೆ, ಪರಿಹಾರ ಸೂಚಿಸಬೇಕು. ಹಲವು ಸುತ್ತಿನ ನಂತರ ಅತ್ಯುತ್ತಮ ಆಲೋಚನೆಗಳು, ಸಲಹೆಗಳನ್ನು ಅಂತಿಮ ಸುತ್ತಿಗೆ ಆಯ್ಕೆ ಮಾಡಿ ತೀರ್ಪುಗಾರರ ಮುಂದಿಡಲಾಗುವುದು. ಸ್ಪರ್ಧೆಯ ಅಂತಿಮ ಸುತ್ತು 2024ರ ಜ. 13ರಂದು ನಡೆಯಲಿದ್ದು, ಅಂದು ನಡೆಯಲಿರುವ ಯುವ ನಾಯಕತ್ವ ಸಮ್ಮೇಳನದಲ್ಲಿ ಡಿ.ಕೆ. ಶಿವಕುಮಾರ್ ಅವರು ಆಯ್ದ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಲಿದ್ದಾರೆ. ಇನ್ಫೋಸಿಸ್ ಪ್ರತಿಷ್ಠಾನದ ಅಧ್ಯಕ್ಷೆ ಸುಧಾ ಮೂರ್ತಿ ಅವರು ಸ್ಪರ್ಧೆಯ ಮುಖ್ಯ ತೀರ್ಪುಗಾರರಾಗಿರುತ್ತಾರೆ.

Towards Professionalism

# ಉದಯಕಾಲ

## ಬ್ರ್ಯಾಂಡ್ ಬೆಂಗಳೂರಿಗಾಗಿ ಐಶ್ವರ್ಯ ಡಿಕೆಎಸ್ ಹೆಗ್ಡೆ ಪರಿಕಲ್ಪನೆ

# ಅಂತರಶಾಲಾ ಐಡಿಯಾಥಾನ್ ಸ್ಪರ್ಧೆ

# ಹೊಸ ಆಲೋಚನೆಗಳ ಆವಿಷ್ಕಾರ!

ಉದಯಕಾಲ ನ್ಯೂಸ್

**ಬೆಂಗಳೂರು:** ತಮ್ಮ ನಗರದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಶಾಲಾ ಮಕ್ಕಳ ಪಾಲ್ಗೊಳ್ಳುವಿಕೆಗೆ ಅವಕಾಶ ಕಲ್ಪಿಸಲು ಐಶ್ವರ್ಯ ಡಿಕೆಎಸ್ ಹೆಗ್ಡೆ 'ಅಂತರಶಾಲಾ ಐಡಿಯಾಥಾನ್ ಸ್ಪರ್ಧೆ' ಪರಿಕಲ್ಪನೆಯನ್ನು ರೂಪಿಸಿದ್ದು ಇದಕ್ಕಾಗಿ ವಿಶಿಷ್ಟ ಅಂತರ-ಶಾಲಾ ಸ್ಪರ್ಧೆಯನ್ನು ಆಯೋಜಿಸಲಾಗಿದೆ.



ಬೆಂಗಳೂರು ನಗರದಾದ್ಯಂತ ಶಾಲೆಗಳಲ್ಲಿ ವಿಭಿನ್ನ ಐಡಿಯಾಥಾನ್ ಮತ್ತು ಯುವ ನಾಯಕತ್ವ ಸಮ್ಮೇಳನ ಹಮ್ಮಿಕೊಳ್ಳಲಾಗಿದೆ. ಬೆಂಗಳೂರು ನಗರವನ್ನು ಸ್ವಚ್ಛ, ಹಸಿರು ಹಾಗೂ ಸುಸ್ಥಿರ ನಗರವನ್ನಾಗಿಸಲು ಕರ್ನಾಟಕ ಸರ್ಕಾರವು ಹಮ್ಮಿಕೊಂಡಿರುವ ಬ್ರ್ಯಾಂಡ್ ಬೆಂಗಳೂರು ಕಾರ್ಯಕ್ರಮದ ಮೂಲ ಉದ್ದೇಶಗಳ ಬಗ್ಗೆ ಮಕ್ಕಳಲ್ಲಿ ಅರಿವು, ಜಾಗೃತಿ ಮೂಡಿಸಲು, ಇದೇ ಮೊದಲ ಬಾರಿಗೆ ಇಂತಹ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಐಡಿಯಾಥಾನ್ ಅಂತರ ಶಾಲಾ ವಿದ್ಯಾರ್ಥಿಗಳ ಕಾರ್ಯಕ್ರಮವಾಗಿದ್ದು, ನಗರದ ಸಮಸ್ಯೆಗಳು ಹಾಗೂ ಸವಾಲುಗಳಿಗೆ ಪರಿಹಾರ ರೂಪಿಸುವ ಪ್ರಕ್ರಿಯೆಯಲ್ಲಿ ವಿದ್ಯಾರ್ಥಿಗಳನ್ನು ಒಳಗೊಳ್ಳುವುದು ಇದರ ಮೂಲ ಉದ್ದೇಶವಾಗಿದೆ.

ಐಡಿಯಾಥಾನ್ ನಾಗರಿಕ ಚಟುವಟಿಕೆಯಲ್ಲಿ ಮಕ್ಕಳು ಪಾಲ್ಗೊಳ್ಳಲು ಒಂದು ವಿಶೇಷ ವೇದಿಕೆ. ಬೆಂಗಳೂರಿನ ಯುವ ಸಮುದಾಯ ನಗರದ ಸಮಸ್ಯೆಗಳಿಗೆ ಸೃಜನಾತ್ಮಕ ಪರಿಹಾರ ಸೂಚಿಸುವ ಹಾಗೂ ನಾಗರಿಕ ಚಟುವಟಿಕೆ ಹೊರಹೊಮ್ಮುವ ರೀತಿಯಲ್ಲಿ ಈ ಸ್ಪರ್ಧೆಯನ್ನು ರೂಪಿಸಲಾಗಿದೆ. ಬೆಂಗಳೂರಿನಾದ್ಯಂತ ಶಾಲೆಗಳಲ್ಲಿನ ಯುವ ಪೀಳಿಗೆಯ ಚಿಂತನಾ ಶಕ್ತಿ ಹಾಗೂ ಪ್ರತಿಭೆಯ ಅನಾವರಣ ಈ ಸ್ಪರ್ಧೆಯ ಗುರಿ. ಈ ಸ್ಪರ್ಧೆಯಲ್ಲಿ ಬೆಂಗಳೂರು ನಗರದಲ್ಲಿರುವ ಶಾಲೆಗಳ 10 ರಿಂದ 12 ಹಾಗೂ ಪಿಯು ಕಾಲೇಜು ವಿದ್ಯಾರ್ಥಿಗಳು ಪಾಲ್ಗೊಳ್ಳಬಹುದು. ಈ ಸ್ಪರ್ಧೆಯಲ್ಲಿ ಭಾಗವಹಿಸಲು ಇಚ್ಛಿಸುವ ಶಾಲೆಯು ಇಬ್ಬರು ವಿದ್ಯಾರ್ಥಿಗಳ ಒಂದು ತಂಡವನ್ನು ಕಳಿಸಬಹುದು.






ಈ ಸ್ಪರ್ಧೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ಕನ್ನಡ ಅಥವಾ ಇಂಗ್ಲಿಷ್ ನಲ್ಲಿ ಮಾತ್ರ ತಮ್ಮ ವಿಚಾರ ಮಂಡಿಸಲು ಅವಕಾಶವಿದೆ. ಈ ಸ್ಪರ್ಧೆಗೆ ಯಾವುದೇ ಪ್ರವೇಶ ಶುಲ್ಕ ಇರುವುದಿಲ್ಲ. ಮೊದಲು ನೊಂದಣಿಯಾಗುವ 200 ಶಾಲೆಗಳಿಗೆ ಮಾತ್ರ ಅವಕಾಶ. ಆಸಕ್ತ ಶಾಲೆಗಳು 2023 ಡಿಸೆಂಬರ್ 5 ರೊಳಗೆ https://www.young-leadersofbengaluru.com ನಲ್ಲಿ ನೊಂದಣಿ ಮಾಡಿಕೊಳ್ಳಬಹುದು.

ಈ ಸ್ಪರ್ಧೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ನಗರದ ಸುಧಾರಣೆಗೆ ತಮ್ಮ ಸಲಹೆ, ಪರಿಹಾರ ಸೂಚಿಸಬೇಕು. ಹಲವು ಸುತ್ತಿನ ನಂತರ ಅತ್ಯುತ್ತಮ ಆಲೋಚನೆಗಳು, ಸಲಹೆಗಳನ್ನು ಅಂತಿಮ ಸುತ್ತಿಗೆ ಆಯ್ಕೆ ಮಾಡಿ ಜಡ್ಜ್ ಗಳ ಮುಂದೆ ಇಡಲಾಗುವುದು. ಐಡಿಯಾಥಾನ್ ಪರಿಹಾರಗಳು 2030ರ ವೇಳೆಗೆ ಸುಸ್ಥಿರ ಅಭಿವೃದ್ಧಿ ಗುರಿಯ ಸುತ್ತ ಕೇಂದ್ರೀಕೃತವಾಗಲಿವೆ.

ಸ್ಪರ್ಧೆಯ ಅಂತಿಮ ಸುತ್ತು 2024ರ ಜನವರಿ 13 ರಂದು ನಡೆಯುವ ಯುವ ನಾಯಕತ್ವ ಸಮ್ಮೇಳನದಲ್ಲಿ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳ ಸಾಧಕರು ಹಾಗೂ ಗಣ್ಯರು ತಮ್ಮ ಅನುಭವ ಹಂಚಿಕೊಳ್ಳುವ ಮೂಲಕ ಸ್ಪರ್ಧೆಯ ವಿದ್ಯಾರ್ಥಿಗಳು ಪರಿಣಾಮಕಾರಿ ಪರಿಹಾರ ಕೇಂದ್ರಿತ ಉತ್ತಮ ನಾಗರಿಕರಾಗಲು ಉತ್ತೇಜನ ನೀಡಲಿದ್ದಾರೆ.

ಉಪ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಯುವ ನಾಯಕತ್ವ ಸಮ್ಮೇಳನದಲ್ಲಿ ವಿದ್ಯಾರ್ಥಿಗಳ ಜೊತೆ ಸಂವಾದ ನಡೆಸಲಿದ್ದು, ಲೇಖಕಿ ಸುಧಾ ಮೂರ್ತಿ ಯುವ ನಾಯಕತ್ವ ಸಮ್ಮೇಳನದ ಮುಖ್ಯ ತೀರ್ಪುಗಾರರಾಗಿರುತ್ತಾರೆ. ವಿದ್ಯಾರ್ಥಿಗಳ ಚಿಂತನೆ, ಪ್ರತಿಭೆ ಆವಿಷ್ಕಾರ ಕಾರ್ಯಕ್ರಮವು ಬೆಂಗಳೂರಿನ ಯುವ ಉತ್ಸಾಹಿ ಶಿಕ್ಷಣತಜ್ಞೆ ಐಶ್ವರ್ಯ ಡಿಕೆಎಸ್ ಹೆಗ್ಡೆ ಅವರ ಪರಿಕಲ್ಪನೆಯಾಗಿದೆ. ನಗರ ಎದುರಿಸುತ್ತಿರುವ ಸಮಸ್ಯೆ ಮತ್ತು ಸವಾಲುಗಳಿಗೆ ಪರಿಹಾರ ಕಂಡುಕೊಳ್ಳಲು ಶಾಲಾ ಮಕ್ಕಳಿಗೆ ಅವಕಾಶ ಕಲ್ಪಿಸುವುದು ಅವರ ಉದ್ದೇಶವಾಗಿದೆ. ಐಡಿಯಾಥಾನ್ ಹಾಗೂ ಯುವ ನಾಯಕತ್ವ ಸಮ್ಮೇಳನ ಕಾರ್ಯಕ್ರಮಗಳನ್ನು ಖ್ಯಾತ ಕ್ವಿಜ್ ಮಾಸ್ಟರ್ ಹಾಗೂ ಶಿಕ್ಷಣ ತಜ್ಞ ಗಿರಿ ಪಿಕ್ ಬ್ರೈನ್ ಬಾಲಸುಬ್ರಮಣಿಯಂ ನೇತೃತ್ವದ ಗ್ರೇಕ್ಯಾಬ್ಸ್ ನಾಲೆಡ್ಜ್ ಟ್ರೈಬ್ ಸಹಯೋಗದಲ್ಲಿ ಆಯೋಜಿಸಲಾಗುತ್ತಿದೆ.

ಸುವರ್ಣ ಕರ್ನಾಟಕ ಪ್ರಶಸ್ತಿ ಪುರಸ್ಕೃತ
SAMYUKTA KARNATAKA
# ಸಂಯುಕ್ತ ಕರ್ನಾಟಕ
ಕನ್ನಡಿಗರ ಸಾಕ್ಷಿಪ್ರಜ್ಞೆ
ಶತಕದತ್ತ ಓಟ... ತೊಂಬತ್ತರ ನೋಟ

# ಅಂತರ ಶಾಲಾ ಐಡಿಯಾಥಾನ್ ಸ್ಪರ್ಧೆ

**ಬೆಂಗಳೂರು:** ಹೊಸ ಆಲೋಚನೆಗಳ ಆವಿಷ್ಕಾರಕ್ಕೆ ಅಂತರ ಶಾಲಾ ಐಡಿಯಾಥಾನ್ ಸ್ಪರ್ಧೆ ಆರಂಭಿಸಲಾಗಿದ್ದು ತಮ್ಮ ನಗರದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಶಾಲಾ ಮಕ್ಕಳ ಪಾಲ್ಗೊಳ್ಳುವಿಕೆಗೆ ಅವಕಾಶ ಕಲ್ಪಿಸಲು ವಿಶಿಷ್ಟ ಅಂತರ-ಶಾಲಾ ಸ್ಪರ್ಧೆಯನ್ನು ಮಕ್ಕಳ ದಿನಾಚರಣೆಯಂದು ಘೋಷಿಸಲಾಗಿದೆ.

**ಬ್ರ್ಯಾಂಡ್ ಬೆಂಗಳೂರು**



ಮಕ್ಕಳ ದಿನಾಚರಣೆ ಅಂಗವಾಗಿ ಬೆಂಗಳೂರು ನಗರಾದ್ಯಂತ ಶಾಲೆಗಳಲ್ಲಿ ವಿಭಿನ್ನ ಐಡಿಯಾಥಾನ್ ಮತ್ತು ಯುವ ನಾಯಕತ್ವ ಸಮ್ಮೇಳನ ಆರಂಭಿಸಲಾಗಿದೆ. ಬೆಂಗಳೂರು ನಗರವನ್ನು ಸ್ವಚ್ಛ, ಹಸಿರು ಹಾಗೂ ಸುಸ್ಥಿರ ನಗರವನ್ನಾಗಿಸಲು ಕರ್ನಾಟಕ ಸರ್ಕಾರವು ಹಮ್ಮಿಕೊಂಡಿರುವ 'ಬ್ರ್ಯಾಂಡ್ ಬೆಂಗಳೂರು' ಕಾರ್ಯಕ್ರಮದ ಮೂಲ ಉದ್ದೇಶಗಳ ಬಗ್ಗೆ ಮಕ್ಕಳಲ್ಲಿ ಅರಿವು, ಜಾಗೃತಿ ಮೂಡಿಸಲು, ಇದೇ ಮೊದಲ ಬಾರಿಗೆ ಇಂತಹ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ವಿದ್ಯಾರ್ಥಿಗಳ ಚಿಂತನೆ, ಪ್ರತಿಭೆ ಆವಿಷ್ಕಾರ ಕಾರ್ಯಕ್ರಮವು ಬೆಂಗಳೂರಿನ ಯುವ ಉತ್ಸಾಹಿ ಶಿಕ್ಷಣ ತಜ್ಞೆ ಐಶ್ವರ್ಯ ಡಿಕೆಎಸ್ ಹೆಗ್ಡೆ ಅವರ ಪರಿಕಲ್ಪನೆಯಾಗಿದೆ. ನಗರ ಎದುರಿಸುತ್ತಿರುವ ಸಮಸ್ಯೆ ಮತ್ತು ಸವಾಲುಗಳಿಗೆ ಪರಿಹಾರ ಕಂಡುಕೊಳ್ಳಲು ಶಾಲಾ ಮಕ್ಕಳಿಗೆ ಅವಕಾಶ ಕಲ್ಪಿಸುವುದು ಅವರ ಉದ್ದೇಶವಾಗಿದೆ. ಈ ಸ್ಪರ್ಧೆಯಲ್ಲಿ ಬೆಂಗಳೂರು ನಗರದಲ್ಲಿರುವ ಶಾಲೆಗಳ 10 ರಿಂದ 12 ಹಾಗೂ ಪಿಯು ಕಾಲೇಜು ವಿದ್ಯಾರ್ಥಿಗಳು ಪಾಲ್ಗೊಳ್ಳಬಹುದು. ಆಸಕ್ತ ಶಾಲೆಗಳು ಡಿಸೆಂಬರ್ 5ರೊಳಗೆ https://www.youngleadersofbengaluru.com ನಲ್ಲಿ ನೊಂದಣಿ ಮಾಡಿಕೊಳ್ಳಬಹುದು.

ಸ್ಪರ್ಧೆಯ ಅಂತಿಮ ಸುತ್ತು 2024ರ ಜನವರಿ 13ರಂದು ನಡೆಯುವ ಯುವ ನಾಯಕತ್ವ ಸಮ್ಮೇಳನದಲ್ಲಿ ನಡೆಯಲಿದೆ. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭಾಗಿಯಾಗಲಿದ್ದಾರೆ. ಸಮ್ಮೇಳನದಲ್ಲಿ ಇನ್ಫೋಸಿಸ್ ಪ್ರತಿಷ್ಠಾನದ ಮುಖ್ಯಸ್ಥರಾದ ಸುಧಾಮೂರ್ತಿ ಮುಖ್ಯ ತೀರ್ಪುಗಾರರಾಗಿರುತ್ತಾರೆ. ಈ ಸ್ಪರ್ಧೆಯನ್ನು ಗ್ರೇಕ್ಯಾಪ್ಸ್ ನಾಲೇಡ್ಜ್ ಟ್ರೈಬ್ ಸಹಯೋಗದಲ್ಲಿ ಆಯೋಜಿಸಲಾಗಿದೆ.

ವಿಶ್ವವಾಣಿ
ವಿಶ್ವಾಸವೇ ವಿಶ್ವ

### ಮಕ್ಕಳ ದಿನಾಚರಣೆಯಾದ ಇಂದು ಚಾಲನೆ | ಡಿ.5ರವರೆಗೆ ನೋಂದಣಿಗೆ ಅವಕಾಶ

# ಶಾಲಾ ಐಡಿಯಾಥಾನ್ ಸ್ಪರ್ಧೆ



**ಬೆಂಗಳೂರು:** ರಾಜ್ಯ ಸರಕಾರದ ಮಹತ್ವಾಕಾಂಕ್ಷಿ ಬ್ರ್ಯಾಂಡ್ ಬೆಂಗಳೂರಿಗಾಗಿ ಹೊಸ ಆಲೋಚನೆಗಳ ಆವಿಷ್ಕಾರಕ್ಕೆ ಅಂತರ ಶಾಲಾ ಐಡಿಯಾಥಾನ್ ಸ್ಪರ್ಧೆ ಆರಂಭಿಸಲಾಗುತ್ತಿದೆ. ತಮ್ಮ ನಗರದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಶಾಲಾ ಮಕ್ಕಳ ಪಾಲ್ಗೊಳ್ಳುವಿಕೆಗೆ ಅವಕಾಶ ಕಲ್ಪಿಸಲು ಅಂತರ-ಶಾಲಾ ಸ್ಪರ್ಧೆಯನ್ನು ಮಕ್ಕಳ ದಿನಾಚರಣೆಯಂದು (ನ.14) ಘೋಷಿಸಲಾಗುತ್ತಿದೆ.

ಮಕ್ಕಳ ದಿನಾಚರಣೆ ಅಂಗವಾಗಿ ಬೆಂಗಳೂರು ನಗರಾದ್ಯಂತ ಶಾಲೆಗಳಲ್ಲಿ ವಿಭಿನ್ನ ಐಡಿಯಾಥಾನ್ ಮತ್ತು ಯುವ ನಾಯಕತ್ವ ಸಮ್ಮೇಳನ ಆರಂಭಿಸಲಾಗುತ್ತಿದ್ದು, ಬೆಂಗಳೂರು ನಗರವನ್ನು ಸ್ವಚ್ಛ, ಹಸಿರು ಹಾಗೂ ಸುಸ್ಥಿರ ನಗರವನ್ನಾಗಿಸಲು ಸರಕಾರ ಹಮ್ಮಿಕೊಂಡಿರುವ ಬ್ರ್ಯಾಂಡ್ ಬೆಂಗಳೂರು ಕಾರ್ಯಕ್ರಮದ ಮೂಲ ಉದ್ದೇಶಗಳ ಬಗ್ಗೆ ಮಕ್ಕಳಲ್ಲಿ ಅರಿವು, ಜಾಗೃತಿ ಮೂಡಿಸಲು ಮತ್ತು ಅವರಿಂದಲೂ ಸಲಹೆಗಳನ್ನು ಪಡೆಯಲು ಇಂತಹ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ನಗರ ಎದುರಿಸುತ್ತಿರುವ ಸಮಸ್ಯೆ ಮತ್ತು ಸವಾಲುಗಳಿಗೆ ಪರಿಹಾರ ಕಂಡುಕೊಳ್ಳಲು ಶಾಲಾ ಮಕ್ಕಳಿಗೆ ಅವಕಾಶ ಕಲ್ಪಿಸುವ ಈ ಸ್ಪರ್ಧೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಪುತ್ರಿ, ಯುವ ಶಿಕ್ಷಣತಜ್ಞೆ ಐಶ್ವರ್ಯ ಡಿ.ಕೆ.ಎಸ್. ಹೆಗ್ಡೆ ಅವರ ಪರಿಕಲ್ಪನೆಯಾಗಿದ್ದು, ಅವರೇ ಕಾರ್ಯಕ್ರಮ ಆಯೋಜಿಸಿದ್ದಾರೆ. ಡಿಸಿಎಂ ಡಿ.ಕೆ.ಶಿವಕುಮಾರ್ ಯುವ ನಾಯಕತ್ವ ಸಮ್ಮೇಳನದಲ್ಲಿ ವಿದ್ಯಾರ್ಥಿಗಳ ಜೊತೆ ಸಂವಾದ ನಡೆಸಲಿದ್ದಾರೆ. ಖ್ಯಾತ ಉದ್ಯಮಿ, ಲೇಖಕಿ ಡಾ.ಸುಧಾ ಮೂರ್ತಿ ಅವರು ಯುವ ನಾಯಕತ್ವ ಸಮ್ಮೇಳನದ ಮುಖ್ಯ ತೀರ್ಪುಗಾರರಾಗಿರುತ್ತಾರೆ. ಖ್ಯಾತ ಕ್ವಿಜ್ ಮಾಸ್ಟರ್ ಹಾಗೂ ಶಿಕ್ಷಣ ತಜ್ಞ ಗಿರಿ ಪಿಕ್ ಬ್ರೈನ್ ಬಾಲ ಸುಬ್ರಮಣಿಯಂ ನೇತೃತ್ವದ ಗ್ರೇ ಕ್ಯಾಪ್ ನಾಲೇಡ್ಜ್ ಟ್ರೈಬ್ ಸಹಯೋಗದಲ್ಲಿ ಕಾರ್ಯಕ್ರಮ ಆಯೋಜಿಸ ಲಾಗುತ್ತಿದೆ. ಸ್ಪರ್ಧೆಯಲ್ಲಿ ಭಾಗವಹಿಸಲು ಇಚ್ಛಿಸುವ ಶಾಲೆಯು ಇಬ್ಬರು ವಿದ್ಯಾರ್ಥಿಗಳ ಒಂದು ತಂಡವನ್ನು ಕಳಿಸಬಹುದು. ಈ ಸ್ಪರ್ಧೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ಕನ್ನಡ ಅಥವಾ ಇಂಗ್ಲಿಷ್ ನಲ್ಲಿ ಮಾತ್ರ ತಮ್ಮ ವಿಚಾರ ಮಂಡಿಸಲು ಅವಕಾಶವಿದೆ. ಯಾವುದೇ ಪ್ರವೇಶ ಶುಲ್ಕ ಇರುವುದಿಲ್ಲ, ಮೊದಲು ನೊಂದಣಿಯಾಗುವ 200 ಶಾಲೆಗಳಿಗೆ ಮಾತ್ರ ಅವಕಾಶ ಕಲ್ಪಿಸಲಾಗುತ್ತದೆ. ಆಸಕ್ತ ಶಾಲೆಗಳು ಡಿ. 5ರೊಳಗೆ https://www.youngleadersofbengaluru.com ನಲ್ಲಿ ನೊಂದಣಿ ಮಾಡಿಕೊಳ್ಳಬಹುದು.

ಸ್ಪರ್ಧೆಯ ಅಂತಿಮ ಸುತ್ತು 2024ರ ಜ.13ರಂದು ಹಮ್ಮಿಕೊಳ್ಳಲಾಗುವ ಯುವ ನಾಯಕತ್ವ ಸಮ್ಮೇಳನದಲ್ಲಿ ನಡೆಯಲಿದೆ. ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳ ಸಾಧಕರು ಹಾಗೂ ಗಣ್ಯರು ತಮ್ಮ ಅನುಭವ ಹಂಚಿಕೊಳ್ಳುವ ಮೂಲಕ ಸ್ಪರ್ಧೆಯ ವಿದ್ಯಾರ್ಥಿಗಳು ಪರಿಣಾಮಕಾರಿ ಪರಿಹಾರ ಕೇಂದ್ರಿತ ಉತ್ತಮ ನಾಗರೀಕರಾಗಲು ಉತ್ತೇಜನ ನೀಡಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಉದ್ದೇಶ ಹಾಗೂ ಸ್ಪರ್ಧೆ ವಿವರ

**ಐಡಿಯಾಥಾನ್ - 23 ಅಂತರ ಶಾಲಾ ವಿದ್ಯಾರ್ಥಿ ಗಳ ಕಾರ್ಯಕ್ರಮವಾಗಿದ್ದು, ನಗರದ ಸಮಸ್ಯೆ ಗಳು ಹಾಗೂ ಸವಾಲುಗಳಿಗೆ ಪರಿಹಾರ ರೂಪಿ ಸುವ ಪ್ರಕ್ರಿಯೆಯಲ್ಲಿ ವಿದ್ಯಾರ್ಥಿಗಳನ್ನು ಒಳ ಗೊಳ್ಳುವುದು ಇದರ ಮೂಲ ಉದ್ದೇಶ. ನಗರದ ಸಮಸ್ಯೆಗಳಿಗೆ ಸೃಜನಾತ್ಮಕ ಪರಿಹಾರ ಸೂಚಿಸುವ ಹಾಗೂ ನಾಗರಿಕ ಚಟುವಟಿಕೆ ಹೊರಹೊಮ್ಮುವ ರೀತಿಯಲ್ಲಿ ಈ ಸ್ಪರ್ಧೆಯನ್ನು ರೂಪಿಸಲಾಗಿದೆ. ಶಾಲೆಗಳಲ್ಲಿನ ಯುವ ಪೀಳಿಗೆಯ ಚಿಂತನಾ ಶಕ್ತಿ ಹಾಗೂ ಪ್ರತಿಭೆಯ ಅನಾವರಣ ಈ ಸ್ಪರ್ಧೆಯ ಗುರಿ. ಬೆಂಗಳೂರು ನಗರದಲ್ಲಿರುವ ಶಾಲೆಗಳ 10ರಿಂದ 12ನೇ ತರಗತಿವರೆಗಿನ ವಿದ್ಯಾರ್ಥಿಗಳು ಪಾಲ್ಗೊಳ್ಳಬಹುದು.**

ಜನದನಿಯ ಸಾರಥಿ

# ವಾರ್ತಾ ಭಾರತಿ

ಜನದನಿಯ ಸಾರಥಿ
ವಾರ್ತಾ ಭಾರತಿ

# ಬ್ರ್ಯಾಂಡ್ ಬೆಂಗಳೂರಿಗಾಗಿ ಅಂತರ್ ಶಾಲೆಗಳ 'ಐಡಿಯಾಥಾನ್ ಸ್ಪರ್ಧೆ'

ಬೆಂಗಳೂರು, ಅ.24: 'ಬ್ರ್ಯಾಂಡ್ ಬೆಂಗಳೂರಿಗಾಗಿ' ಹೊಸ ಆಲೋಚನೆಗಳ ಆವಿಷ್ಕಾರಕ್ಕೆ ಅಂತರ ಶಾಲಾ ಐಡಿಯಾಥಾನ್ ಸ್ಪರ್ಧೆ ಆರಂಭಿಸಲಾಗಿದೆ. ನಗರದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಶಾಲಾ ಮಕ್ಕಳ ಪಾಲ್ಗೊಳ್ಳುವಿಕೆಗೆ ಅವಕಾಶ ಕಲ್ಪಿಸಲು ಈ ವಿಶಿಷ್ಟ ಅಂತರ-ಶಾಲಾ ಸ್ಪರ್ಧೆಯನ್ನು ಮಕ್ಕಳ ದಿನಾಚರಣೆಯಂದು ಘೋಷಿಸಲಾಗಿದೆ.



ಮಕ್ಕಳ ದಿನಾಚರಣೆ ಅಂಗವಾಗಿ ನಗರಾದ್ಯಂತ ಶಾಲೆಗಳಲ್ಲಿ ವಿಭಿನ್ನ ಐಡಿಯಾಥಾನ್ ಮತ್ತು ಯುವ ನಾಯಕತ್ವ ಸಮ್ಮೇಳನ ಆರಂಭಿಸಲಾಗಿದೆ. ಬೆಂಗಳೂರು ನಗರವನ್ನು ಸ್ವಚ್ಛ, ಹಸಿರು ಹಾಗೂ ಸುಸ್ಥಿರ ನಗರವನ್ನಾಗಿಸಲು ಕರ್ನಾಟಕ ಸರಕಾರವು ಹಮ್ಮಿಕೊಂಡಿರುವ ಬ್ರ್ಯಾಂಡ್ ಬೆಂಗಳೂರು ಕಾರ್ಯಕ್ರಮದ ಮೂಲ ಉದ್ದೇಶಗಳ ಬಗ್ಗೆ ಮಕ್ಕಳಲ್ಲಿ ಅರಿವು, ಜಾಗೃತಿ ಮೂಡಿಸಲು, ಇದೇ ಮೊದಲ ಬಾರಿಗೆ ಇಂತಹ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

'ಐಡಿಯಾಥಾನ್-23' ಅಂತರ್‌ಶಾಲಾ ವಿದ್ಯಾರ್ಥಿಗಳ ಕಾರ್ಯಕ್ರಮವಾಗಿದ್ದು, ನಗರದ ಸಮಸ್ಯೆಗಳು ಹಾಗೂ ಸವಾಲುಗಳಿಗೆ ಪರಿಹಾರ ರೂಪಿಸುವ ಪ್ರಕ್ರಿಯೆಯಲ್ಲಿ ವಿದ್ಯಾರ್ಥಿಗಳನ್ನು ಒಳಗೊಳ್ಳುವುದು ಇದರ ಮೂಲ ಉದ್ದೇಶವಾಗಿದೆ. ಇದು ನಾಗರಿಕ ಚಟುವಟಿಕೆಯಲ್ಲಿ ಮಕ್ಕಳು ಪಾಲ್ಗೊಳ್ಳಲು ಒಂದು ವಿಶೇಷ ವೇದಿಕೆ. ಬೆಂಗಳೂರಿನ ಯುವ ಸಮುದಾಯ ನಗರದ ಸಮಸ್ಯೆಗಳಿಗೆ ಸೃಜನಾತ್ಮಕ ಪರಿಹಾರ ಸೂಚಿಸುವ ಹಾಗೂ ನಾಗರಿಕ ಚಟುವಟಿಕೆ ಹೊರಹೊಮ್ಮುವ ರೀತಿಯಲ್ಲಿ ಈ ಸ್ಪರ್ಧೆಯನ್ನು ರೂಪಿಸಲಾಗಿದೆ.

ಈ ಸ್ಪರ್ಧೆಯಲ್ಲಿ ನಗರದಲ್ಲಿರುವ ಶಾಲೆಗಳ 10 ರಿಂದ 12ನೇ ತರಗತಿಯ ವಿದ್ಯಾರ್ಥಿಗಳು ಪಾಲ್ಗೊಳ್ಳಬಹುದು. ಭಾಗವಹಿಸಲು ಇಚ್ಛಿಸುವ ಶಾಲೆಯು ಇಬ್ಬರು ವಿದ್ಯಾರ್ಥಿಗಳ ಒಂದು ತಂಡವನ್ನು ಕಳಿಸಬಹುದು. ವಿದ್ಯಾರ್ಥಿಗಳು ಕನ್ನಡ ಅಥವಾ ಇಂಗ್ಲಿಷ್‌ನಲ್ಲಿ ಮಾತ್ರ ತಮ್ಮ ವಿಚಾರ ಮಂಡಿಸಲು ಅವಕಾಶವಿದೆ. ಈ ಸ್ಪರ್ಧೆಗೆ ಯಾವುದೇ ಪ್ರವೇಶ ಶುಲ್ಕ ಇರುವುದಿಲ್ಲ. ಮೊದಲು ನೋಂದಣಿಯಾಗುವ 200 ಶಾಲೆಗಳಿಗೆ ಮಾತ್ರ ಅವಕಾಶ ಕಲ್ಪಿಸಲಾಗಿದೆ.

ಆಸಕ್ತ ಶಾಲೆಗಳು 2023 ಡಿ.5ರೊಳಗೆ https://www.youngleadersof-bengaluru.comನಲ್ಲಿ ನೋಂದಣಿ ಮಾಡಿಕೊಳ್ಳಬಹುದು. ಈ ಸ್ಪರ್ಧೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ನಗರದ ಸುಧಾರಣೆಗೆ ತಮ್ಮ ಸಲಹೆ, ಪರಿಹಾರ ಸೂಚಿಸಬೇಕು. ಹಲವು ಸುತ್ತಿನ ನಂತರ ಅತ್ಯುತ್ತಮ ಆಲೋಚನೆಗಳು, ಸಲಹೆಗಳನ್ನು ಅಂತಿಮ ಸುತ್ತಿಗೆ ಆಯ್ಕೆ ಮಾಡಿ ಜಡ್ಜ್‌ಗಳ ಮುಂದೆ ಇಡಲಾಗುವುದು. ಐಡಿಯಾಥಾನ್ ಪರಿಹಾರಗಳು 2030ರ ವೇಳೆಗೆ ಸುಸ್ಥಿರ ಅಭಿವೃದ್ಧಿ ಗುರಿಯ ಸುತ್ತ ಕೇಂದ್ರೀಕೃತವಾಗಲಿವೆ.

ಸ್ಪರ್ಧೆಯ ಅಂತಿಮ ಸುತ್ತು 2024ರ ಜ.13ರಂದು ನಡೆಯುವ ಯುವ ನಾಯಕತ್ವ ಸಮ್ಮೇಳನದಲ್ಲಿ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳ ಸಾಧಕರು ಹಾಗೂ ಗಣ್ಯರು ತಮ್ಮ ಅನುಭವ ಹಂಚಿಕೊಳ್ಳುವ ಮೂಲಕ ಸ್ಪರ್ಧೆಯ ವಿದ್ಯಾರ್ಥಿಗಳು ಪರಿಣಾಮಕಾರಿ ಪರಿಹಾರ ಕೇಂದ್ರಿತ ಉತ್ತಮ ನಾಗರಿಕರಾಗಲು ಉತ್ತೇಜನ ನೀಡಲಿದ್ದಾರೆ. ಖ್ಯಾತ ಉದ್ಯಮಿ, ಚಿಂತಕಿ ಹಾಗೂ ಲೇಖಕಿ ಸುಧಾ ಮೂರ್ತಿ ಅವರು ಯುವ ನಾಯಕತ್ವ ಸಮ್ಮೇಳನದ ಮುಖ್ಯ ತೀರ್ಪುಗಾರರಾಗಿರುತ್ತಾರೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ಐಶ್ವರ್ಯಾ ಪರಿಕಲ್ಪನೆ



**ವಿದ್ಯಾರ್ಥಿಗಳ ಚಿಂತನೆ, ಪ್ರತಿಭೆ ಆವಿಷ್ಕಾರ ಕಾರ್ಯಕ್ರಮವು ಶಿಕ್ಷಣ ತಜ್ಞೆ ಐಶ್ವರ್ಯಾ ಡಿಕೆಎಸ್ ಹೆಗ್ಡೆ ಅವರ ಪರಿಕಲ್ಪನೆಯಾಗಿದೆ. ನಗರ ಎದುರಿಸುತ್ತಿರುವ ಸಮಸ್ಯೆ ಮತ್ತು ಸವಾಲುಗಳಿಗೆ ಪರಿಹಾರ ಕಂಡುಕೊಳ್ಳಲು ಶಾಲಾ ಮಕ್ಕಳಿಗೆ ಅವಕಾಶ ಕಲ್ಪಿಸುವುದು ಅವರ ಉದ್ದೇಶವಾಗಿದೆ.**

THE HANS INDIA

# 'Ideathon '23' launched to find solutions for Brand Bengaluru

BHARATH ANJANAPPA
BENGALURU

**It is an interschool competition, designed to foster creative problem-solving and active citizenship among the youth of Bengaluru. The event aims to harness the potential of young minds from schools across the city**

UNIQUE Inter-school competition has been announced on Children's Day to promote active citizenship and involve school students in finding solutions for their city.

On the occasion of Children's Day a unique Ideathon and the Youth Leadership Summit have been launched for schools across the city of Bengaluru. This is a pioneering effort reflecting on the vision of the Government of Karnataka through its initiative "Brand Bengaluru", to help the city become clean, green and sustainable.

Ideathon '23 is an Inter-school student innovation initiative to involve school students in providing solutions to the problems and challenges of the city. A unique way of involving the students in active citizenship. Ideathon '23 is an interschool competition, designed to foster creative problem-solving and active citizenship among the youth of Bengaluru. The event aims to harness the potential of young minds from schools across Bengaluru.

The challenge is open to students from grades 10 to 12 + PU Colleges. Each participating school can be represented by one team of two students. The challenge is open to schools located only in the city of Bengaluru. The challenge will accept solutions only in Kannada and English. There is No Entry Fee. Only the first 200 entries will be considered. The last date is December 05, 2023.




Schools can register on www.youngleadersofbengaluru.com The students will ideate and propose solutions for the betterment of their city. After multiple rounds of screening and selection the top ideas will be presented to and juried during the grand finale. Ideathon solutions would broadly revolve around SDG Goals 2030.

The grand finale will be held as part of a Youth Leadership Summit 2023 scheduled to be held on January 13, 2024, where eminent personalities and achievers will share their experiences to inspire and motivate the participating students to strive for excellence and to be solution-oriented citizens.

Deputy Chief Minister D K Shivakumar will interact with the students during the Youth Leadership Summit. Sudha Murthy, noted educator and author will chair the jury and be part of the Youth Leadership Summit to inspire the youth. The student innovation initiative is conceptualized by Aisshwarya DKS Hegde, a young and passionate educator from Bengaluru. Her vision is to involve school students in providing solutions to the problems and challenges of the city.

Other prominent citizens of Bengaluru will be involved as part of the jury and the Youth Leadership Summit. Ideathon and the Youth Leadership Summit are to be conducted with the support of Greycaps Knowledge Tribe, spearheaded by noted quizmaster and educator Giri Pickbrain Balasubramaniam.